ಬಿಡ್‌ದಾರರಿಗೆ, ಜನವರಿ–2015 ರಲ್ಲಿ ಮುದ್ರಣ ಮತ್ತು ಸರಬರಾಜು ಆದೇಶ ನೀಡಲಾಗಿರುತ್ತದೆ.

ಗಂಗಾ ಕಲ್ಯಾಣ ಯೋಜನೆಯಡಿ ಮಂಜೂರಾದ ಕೊಳವೆ ಬಾವಿಗಳು

2712 (2794); ಶ್ರೀ ಎಂ.ಟಿ.ಬಿ. ನಾಗರಾಜ್ (ಹೊಸಕೋಟೆ)

ಅ) 2013–14 ಮತ್ತು 2014–15ನೇ ಸಾಲಿನಲ್ಲಿ ಹೊಸಕೋಟೆ ತಾಲ್ಲೂಕಿಗೆ ಎಸ್.ಸಿ.ಪಿ/ಟಿ.ಎಸ್.ಪಿ. ಹಿಂದುಳಿದ ವರ್ಗಗಳಿಗೆ ಗಂಗಾ ಕಲ್ಯಾಣ ಯೋಜನೆಯಡಿ ಮಂಜೂರಾದ ಕೊಳವೆಬಾವಿಗಳ ಸಂಖ್ಯೆ ಎಷ್ಟು (ಜಾತಿವಾರು ಮಾಹಿತಿ ನೀಡುವುದು);

ಆ) ಸದರಿ ಯೋಜನೆಯಡಿ ಕೊಳವೆಬಾವಿಗಳಿಗೆ ಬಿಡುಗಡೆಗೊಳಿಸಿದ ಅನುದಾನವೆಷ್ಟು;

ಇ) ಹಾಗಿದ್ದಲ್ಲಿ, ಹೊಸಕೋಟೆ ತಾಲ್ಲೂಕಿಗೆ ಮಂಜೂರಾದ ಕೊಳವೆ ಬಾವಿಗಳ ಪೈಕಿ ಎಷ್ಟು; ಕೊಳವೆ ಬಾವಿಗಳನ್ನು ಕೊರೆಯಲಾಗಿದೆ. ಬಾಕಿ ಉಳಿದಿರುವ ಕೊಳವೆ ಬಾವಿಗಳೆಷ್ಟು; ಹಾಗೂ ಬಾಕಿಯಿರುವ ಕೊಳವೆಬಾವಿಗಳನ್ನು ಪ್ರಸ್ತುತ ಸಾಲಿನಲ್ಲಿಯೇ ಕೊರೆಸಲಾಗುವುದೇ?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಹೊಸಕೋಟೆ ತಾಲ್ಲೂಕಿನಲ್ಲಿ 2013–14 ಮತ್ತು 2014–15ನೇ ಸಾಲಿಗೆ ಮಂಜೂರು ಮಾಡಿರುವ ಕೊಳವೆಬಾವಿಗಳ ವಿವರ ಕೆಳಕಂಡಂತಿದೆ.

ಕ್ರ ಸಂ.	ವರ್ಷ	ಮಂಜೂರಾದ ಕೊಳವೆಬಾವಿಗಳ ಸಂಖ್ಯೆ		
		ಪರಿಶಿಷ್ಟ ಜಾತಿ	ಪರಿಶಿಷ್ಟ ಪಂಗಡ	ಹಿಂದುಳಿದ ವರ್ಗ
1	2013–14	31	7	26
2	2014–15	50	11	

ಆ) **ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ:** ಪ್ರತಿ ಕೊಳವೆಬಾವಿ ಕೊರೆದು, ಪಂಪ್ ಅಳವಡಿಸಿ ವಿದ್ಯುದ್ದೀಕರಣಗೊಳಿಸಲು ₹ 2.00 ಲಕ್ಷ (ವಿದ್ಯುದ್ದೀಕರಣದ ಬಾಬ್ತು ವಿದ್ಯುತ್ ಸರಬರಾಜು ಕಂಪನಿಗಳಿಗೆ ಬಿಡುಗಡೆ ಮಾಡಿರುವ ₹ 0.50 ಲಕ್ಷ ಸೇರಿ)ದಂತೆ, 2013–14ನೇ ಸಾಲಿಗೆ ₹ 62.00 ಲಕ್ಷ ಮತ್ತು 2014–15ನೇ ಸಾಲಿಗೆ ₹ 100.00 ಲಕ್ಷ ಅನುದಾನ ಬಿಡುಗಡೆಯಾಗಿರುತ್ತದೆ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ: 2013–14 ನೇ ಸಾಲಿನಲ್ಲಿ ₹ 10.50 ಲಕ್ಷ ಮತ್ತು 2014–15 ನೇ ಸಾಲಿನಲ್ಲಿ ₹ 16.50 ಲಕ್ಷಗಳ ಅನುದಾನವನ್ನು ನಿಗದಿಪಡಿಸಲಾಗಿದೆ.

ಡಿ.ದೇವರಾಜ ಅರಸು ಹಿಂದುಳಿದ ಅಭಿವೃದ್ಧಿ ನಿಗಮ: ಸದರಿ ಯೋಜನೆಯಡಿ ₹ 37.69 ಲಕ್ಷಗಳನ್ನು ಮಂಜೂರು ಮಾಡಿದ್ದು, ಕೊಳವೆ ಬಾವಿಗಳನ್ನು ಕೊರೆಯುವ ಕೆಲಸ ಪೂರ್ಣಗೊಂಡಿಲ್ಲದೆ ಇರುವುದರಿಂದ ಅನುದಾನ ಬಿಡುಗಡೆಯಾಗಿರುವುದಿಲ್ಲ. ಕೊಳವೆ ಬಾವಿಗಳನ್ನು ಕೊರೆಯುವ ಕೆಲಸ ಪೂರ್ಣಗೊಂಡ ಕೂಡಲೇ ಅದಕ್ಕನುಗುಣವಾಗಿ ಅನುದಾನ ಬಿಡುಗಡೆ ಮಾಡಲಾಗುವುದು.

ಇ) **ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ:** ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ ಸನೀಇ 13 ಅಜ 2011 ದಿನಾಂಕ:16.08.2012ರಂತೆ ಹೊಸಕೋಟೆ ತಾಲ್ಲೂಕನ್ನು ಅಂತರ್ಜಲ ಅತಿಬಳಕೆಯ ತಾಲೂಕೆಂದು ಗುರುತಿಸಿದ್ದು, ಇಲ್ಲಿ ಕೊಳವೆಬಾವಿಗಳನ್ನು ಕೊರೆಯಲು ಕರ್ನಾಟಕ ಅಂತರ್ಜಲ ಪ್ರಾಧಿಕಾರದಿಂದ ಅನುಮತಿ ಪಡೆಯಬೇಕಾಗಿರುತ್ತದೆ. ಅಂತರ್ಜಲ ಪ್ರಾಧಿಕಾರವು ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ನಿಗಮದಿಂದ ಕೊಳವೆಬಾವಿಗಳನ್ನು ಕೊರೆಯಲು ಅನುಮತಿ ಕೋರಿ ಸಲ್ಲಿಸಿದ್ದ ಕೋರಿಕೆಯನ್ನು ತಿರಸ್ಕರಿಸಿದ ಕಾರಣ ಕೊಳವೆಬಾವಿ ಕೊರೆಯುವ ಕಾಮಗಾರಿ ಪ್ರಾರಂಭವಾಗಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಿ ಅಂತಿಮವಾಗಿ ದಿನಾಂಕ:18.11.2014ರಂದು ಅನುಮತಿ

ಪಡೆಯಲಾಗಿದೆ. ಕೊಳವೆಬಾವಿಗಳನ್ನು ಕೊರೆಯಲು ದಿನಾಂಕ:29.12.2014ರಂದು ಟೆಂಡರ್ ಅಧಿಸೂಚನೆ ಹೊರಡಿಸಿದ್ದು, ಟೆಂಡರ್ ಪ್ರಕ್ರಿಯೆಗೆ ಶ್ರೀ ಚಿನ್ನಪ್ಪ ರೆಡ್ಡಿ, ಬೆಂಗಳೂರು ರವರು ಕರ್ನಾಟಕ ಘನ ಉಚ್ಚನ್ಯಾಯಾಲಯದಿಂದ ಮಧ್ಯಾಂತರ ತಡೆಯಾಜ್ಞೆ ತಂದಿದ್ದು, ತಡೆಯಾಜ್ಞೆಯನ್ನು ತೆರವುಗೊಳಿಸಲು ಕಾನೂನು ಕ್ರಮ ಜರುಗಿಸಲಾಗುತ್ತಿದೆ. ನ್ಯಾಯಾಲಯದ ತಡೆಯಾಜ್ಞೆ ತೆರವುಗೊಂಡ ತಕ್ಷಣ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಕೊಳವೆಬಾವಿಗಳನ್ನು ಕೊರೆಯಲು ಕ್ರಮ ಜರುಗಿಸಲಾಗುವುದು.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ: ಕೊಳವೆಬಾವಿಗಳನ್ನು ಕೊರೆಯಲು ಟೆಂಡರ್ ಕರೆಯಲಾಗಿದ್ದು, ಟೆಂಡರ್ ಅಂತಿಮಗೊಂಡ ಕೂಡಲೇ ಕೊಳವೆಬಾವಿಗಳನ್ನು ಕೊರೆಯಿಸಲಾಗುವುದು.

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ: ಹೊಸಕೋಟೆ ತಾಲ್ಲೂಕಿಗೆ ಮಂಜೂರಾದ 26 ಕೊಳವೆ ಬಾವಿಗಳ ಪೈಕಿ ಕೊಳವೆ ಬಾವಿಗಳನ್ನು ಕೊರೆದಿರುವುದಿಲ್ಲ. 26 ಕೊಳವೆ ಬಾವಿಗಳು ಕೊರೆಯಲು ಬಾಕಿ ಉಳಿದಿರುತ್ತವೆ. 2013–14ನೇ ಸಾಲಿನ ಗುರಿಯ ಶೇಕಡಾ 25ರಷ್ಟು ಕೊಳವೆ ಬಾವಿಗಳನ್ನು 2012–13ನೇ ಸಾಲಿನ ದರಗಳನ್ನು ಮುಂದುವರೆಸಿ ಕೊರೆಯಿಸಲು ಕಾರ್ಯಾದೇಶ ನೀಡಲಾಗಿರುತ್ತದೆ. ಕೊಳವೆ ಬಾವಿ ಕೊರೆಯುವ ಕೆಲಸವನ್ನು ಪ್ರಾರಂಭಿಸಲು ಕ್ರಮವಹಿಸಲಾಗಿದೆ.

2013–14ನೇ ಸಾಲಿನ ಬಾಕಿ ಗುರಿ ಹಾಗೂ 2014–15ನೇ ಸಾಲಿನ ಗುರಿ ಕೊಳವೆ ಬಾವಿಗಳನ್ನು ಕೊರೆಯಲು ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಕೊಳವೆ ಬಾವಿಗಳನ್ನು ಕೊರೆಯಿಸಲು ಕ್ರಮವಹಿಸಲಾಗುವುದು.